## ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ .

## ಸಿ.ಸಿ. ನಂ. 1792/2019

| | | |
|---|---|---|
| ಸಾಕ್ಷಿದಾರರ ಹೆಸರು | : | ರಾಜು ಕೆ ಎನ್ |
| ತಂದೆಯ ಹೆಸರು | : | ನಂಜಯ್ಯ |
| ವಯಸ್ಸು | : | 49 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಕೆಂಪಿಸಿದ್ದನಹುಂಡಿ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 23.06.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಆರೋಪಿಯನ್ನು ನಾನು ನೋಡಿಲ್ಲ. ಈಗ ನನಗೆ ತೋರಿಸುತ್ತಿರುವ ನಿ.ಪಿ-1 ರಲ್ಲಿ ನನ್ನ ಸಹಿ ಇದ್ದು, ಸದರಿ ಸಹಿಯನ್ನು ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಹಾಕಿರುತ್ತೇನೆ. ಸಾಕ್ಷಿಯು ಸದರಿ ದಾಖಲೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿ.ಪಿ-1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ-1(ಸಿ) ಎಂದು ಗುರುತಿಸಲಾಯಿತು. ನಿ.ಪಿ-1 ರಲ್ಲಿ ಏನೆಲ್ಲಾ ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಮತ್ತು ಏನನ್ನೂ ವಶಪಡಿಸಿಕೊಂಡಿರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅ. ರವರಿಂದಃ**

ದಿನಾಂಕ 31.03.2019 ರಂದು ಸಂಜೆ 6.00 ಗಂಟೆ ಸಮಯದಲ್ಲಿ ಚಾಸಾ-1ರವರು ನನ್ನನ್ನು ಮತ್ತು ಚಾಸಾ-2 ರವರನ್ನು ಠಾಣೆಗೆ ಬರಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಮಗೆ ದಾಳಿಯ ವಿಷಯ ತಿಳಿಸಿ ಪಂಚರಾಗಬೇಕೆಂದು ಸಹಕರಿಸುವಂತೆ ನನ್ನನ್ನು ಮತ್ತು ಚಾಸಾ-2 ರವರನ್ನು ಕೇಳಿಕೊಂಡಿರುತ್ತಾರೆಂದರೆ ಸರಿಯಲ್ಲ. ನಂತರ ನಾವು ಅದಕ್ಕೆ ಒಪ್ಪಿದಾಗ, ನಮ್ಮನ್ನು ಮತ್ತು ಸಿಬ್ಬಂಧಿಯವರನ್ನು ಇಲಾಖಾ ಜೀಫ್ ನಂಬರ್ ಕೆಎ55-ಜಿ 403 ರಲ್ಲಿ ಹೆಗ್ಗಡಹಳ್ಳಿ ಗ್ರಾಮಕ್ಕೆ ಕರೆದುಕೊಂಡು ಹೋಗಿ ವಾಹನವನ್ನು ಮರೆಯಾಗಿ ನಿಲ್ಲಿಸಿ ನೋಡಿದಾಗ ಆರೋಪಿ ಒಂದು ಪ್ಲಾಸ್ಟೀಕ್ ಚೀಲದಲ್ಲಿ ಮಧ್ಯದ ಟೆಟ್ರಾ ಪ್ಯಾಕೇಟ್ ಗಳನ್ನು ಇಟ್ಟುಕೊಂಡು ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದರು ಎಂದರೆ ಸರಿಯಲ್ಲ. ನಂತರ ಆರೋಪಿಯನ್ನು ಹಿಡಿದು ವಿಚಾರಿಸಲಾಗಿ, ಮಧ್ಯದ ಪೌಚ್ ಗಳನ್ನು ನಂಜನಗೂಡಿನ ಗುರುರಾಜ ವೈನ್ಸ್ ಅಂಗಡಿಯಿಂದ ತಂದಿರುವುದಾಗಿ ತಿಳಿಸಿದ್ದು, ಯಾವುದೇ ಪರವಾನಗಿ ಇರುವುದಿಲ್ಲವೆಂದು ಹೇಳಿರುತ್ತಾರೆ ಎಂದರೆ ಸರಿಯಲ್ಲ. ನಂತರ ಅವುಗಳನ್ನು ಅಮಾನತ್ತುಪಡಿಸಿಕೊಂಡು 71 ಟೆಟ್ರಾ ಪ್ಯಾಕೆಟ್ ಗಳನ್ನು ರಾಸಾಯನಿಕ ಪರೀಕ್ಷೆಗಾಗಿ ತೆಗೆದಿರಿಸಿ, ಅವುಗಳಿಗೆ ಬಿಳಿ ಬಟ್ಟೆಯಿಂದ ಸುತ್ತಿ M ಎಂಬ ಅಕ್ಷರದಿಂದ ಸೀಲ್ ಮಾಡಿ ನಮ್ಮ ಮತ್ತು ತನಿಖಾಧಿಕಾರಿಯವರ ಸಹಿಯುಳ್ಳ ಚೀಟಿಯನ್ನು ಅಂಟಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ಮಹಜರ್ ಮಾಡಿ ನನ್ನ ಮತ್ತು ಚಾಸಾ-2 ರವರ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ. ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಆರೋಪಿಯನ್ನು ವಶಕ್ಕೆ ಪಡೆದು, ಮಧ್ಯದ ಪ್ಯಾಕೆಟ್ ಗಳನ್ನು ವಶಪಡಿಸಿಕೊಂಡು ಮಹಜರ್ ಮಾಡಿದ್ದರೂ ಕೂಡ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಈಗ ನನಗೆ ಓದಿ ಹೇಳಿದಂತೆ ನಾನು ತನಿಖಾಧಿಕಾರಿಗಳ ಮುಂದೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ಸದರಿ ಭಾಗವನ್ನು ಅಲ್ಲಗಳೆದಿದ್ದರಿಂದ ಕೆಂಪು ಶಾಹಿಯಿಂದ

ಗುರುತಿಸಲಾದ ಸದರಿ ಹೇಳಿಕೆಯ ಭಾಗವನ್ನು ನಿ.ಪಿ-6 ಎಂದು ಗುರುತಿಸಲಾಯಿತು. ಪೋಲೀಸರು ವಶಪಡಿಸಿಕೊಂಡ ಮಧ್ಯದ ಟೆಟ್ರಾ ಪ್ಯಾಕೆಟ್ ಗಳನ್ನು ನೋಡಿದರೆ ನನಗೆ ಗುರುತಿಸಲಾಗುವುದಿಲ್ಲ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದಃ ಏನೂ ಇರುವುದಿಲ್ಲ.

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

ಸಹಿ/ –

**ಪ್ರಧಾನ ಸಿವಿಲ್ ನಾಯಾಧೀಶರು ಮತ್ತು ಪ್ರ.ದ.ನ್ಯಾದಂ.,**

**ನಂಜನಗೂಡು.**